# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2173 (2573) |
| ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24/03/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಸಂಘಟಿತ ಕಾರ್ಮಿಕರೆಂದು ರಾಜ್ಯದಲ್ಲಿ ನೊಂದಾಯಿಸಿ ಕೊಂಡಿರುವವರ ಸಂಖ್ಯೆ ಎಷ್ಟು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಮಂಡಳಿಗಳಲ್ಲಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ವಿವರಗಳು ಈ ಕೆಳಕಂಡಂತಿರುತ್ತದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br><br>ಅಸಂಘಟಿತ ವಲಯಕ್ಕೆ ಸೇರಿದ ಒಂದು ವರ್ಗವಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಫಲಾನುಭವಿಗಳಾಗಿ 29.90 ಲಕ್ಷ ಕಾರ್ಮಿಕರು ನೋಂದಣಿಯಾಗಿರುತ್ತಾರೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು/ ಕೋವಿಡ್-19ರ ವಿಶೇಷ ಪ್ಯಾಕೇಜ್‌ನಡಿ ಹಾಗೂ ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ಮಾಹಿತಿ ಈ ಕೆಳಕಂಡಂತಿದೆ. |

| ಯೋಜನೆಗಳು | ನೊಂದಾಯಿತ ಕಾರ್ಮಿಕರ ಸಂಖ್ಯೆ |
|---|---|
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 8,40,561 (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ) |
| ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಣಿ | 2,65,887 |
| ಕೋವಿಡ್-19ರ ವಿಶೇಷ ಪ್ಯಾಕೇಜ್ | 14,52,943 |
| ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಣಿಯಾದ ಅಸಂಘಟಿತ ಕಾರ್ಮಿಕರು | 56,97,671 |

ಆ) ಸದರಿಯವರಿಗೆ ಇಲಾಖೆಯಲ್ಲಿ ಯಾವ ಯಾವ ಸವಲತ್ತುಗಳನ್ನು ನೀಡಲಾಗುತ್ತಿದೆ; (ವಿವರ ನೀಡುವುದು)

**ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಮಂಡಳಿಗಳಲ್ಲಿ ಅಸಂಘಟಿತ ಕಾರ್ಮಿಕರಿಗೆ ನೀಡುತ್ತಿರುವ ಸೌಲಭ್ಯಗಳ ವಿವರ ಈ ಕೆಳಗಿನಂತಿವೆ.**

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**

ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗಾಗಿ ಮಂಡಳಿಯು ರೂಪಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧದಲ್ಲಿ** ಲಗತ್ತಿಸಿದೆ.

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**

ಈ ಮಂಡಳಿಯು ಜಾರಿಗೊಳಿಸುತ್ತಿರುವ ಸಾಮಾಜಿಕ ಭದ್ರತಾ ಯೋಜನೆಗಳಡಿ ದೊರಕುವ ಸೌಲಭ್ಯಗಳು ಈ ಕೆಳಗಿನಂತಿವೆ:

(1) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:- ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ

ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

**(ಅ) ಅಪಘಾತ ಪರಿಹಾರ ಸೌಲಭ್ಯ:**

ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದವರಿಗೆ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.

ಇಲ್ಲಿಯವರೆಗೆ 1060 ಅಪಘಾತ ಪ್ರಕರಣಗಳಲ್ಲಿ ರೂ.35,97,23,502./-ಗಳ ಅಪಘಾತ ಪರಿಹಾರವನ್ನು ವಿತರಿಸಲಾಗಿದೆ.

**(ಆ) ಶೈಕ್ಷಣಿಕ ಧನ ಸಹಾಯ** : ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.

ಇಲ್ಲಿಯವರೆಗೆ 687 ವಿದ್ಯಾರ್ಥಿಗಳಿಗೆ ರೂ.68,70,000/-ಗಳ ಶೈಕ್ಷಣಿಕ ಧನ ಸಹಾಯ ವಿತರಿಸಲಾಗಿದೆ.

**(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**

ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಗುರುತಿನ ಚೀಟಿ ನೀಡಲಾಗುತ್ತಿದೆ. ಪ್ರಸ್ತುತ, ಆನ್‌ಲೈನ್ ಮೂಲಕ ನೊಂದಾಯಿಸಲು ಅವಕಾಶವಿದ್ದು, ಸ್ಥಳದಲ್ಲೇ ಗುರುತಿನ ಚೀಟಿಯನ್ನು ಪಡೆಯಬಹುದಾಗಿರುತ್ತದೆ. ಈವರೆಗೆ ಒಟ್ಟು

2,65,887 ಕಾರ್ಮಿಕರನ್ನು ನೊಂದಾಯಿಸಲಾಗಿದೆ. ಸದರಿ ಯೋಜನೆಯಡಿ ಯಾವುದೇ ಆರ್ಥಿಕ ಸೌಲಭ್ಯ ನೀಡಲಾಗುತ್ತಿಲ್ಲ.

**ಇ-ಶ್ರಮ್ ಕಾರ್ಯಕ್ರಮ:-**

ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ (NDUW-National Database for Unorganised Worker) ಕ್ರೋಢೀಕರಿಸಲು ಉದ್ದೇಶಿಸಿದ್ದು, ಸಾಮಾನ್ಯ ಸೇವಾ ಕೇಂದ್ರಗಳ (CSC) ಸಹಯೋಗದೊಂದಿಗೆ ದಿನಾಂಕ:26-08-2021ರಿಂದ ಸುಮಾರು 379 ವರ್ಗಗಳ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್ ಮೂಲಕ ನೋಂಧಾಯಿಸಲಾಗುತ್ತಿದೆ. ಈ ಯೋಜನೆಯಡಿ ನೋಂದಣಿಯಾಗುವ ಕಾರ್ಮಿಕರು ಒಂದು ವರ್ಷದ ಅವಧಿಗೆ ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆಯಡಿ ರೂ.2.00 ಲಕ್ಷಗಳವರೆಗೆ ಅಪಘಾತ ವಿಮೆಯನ್ನು ಪಡೆಯಬಹುದಾಗಿರುತ್ತದೆ ಹಾಗೂ ಒಂದು ವರ್ಷದ ವಿಮಾ ಪ್ರೀಮಿಯಂ ಮೊತ್ತವನ್ನು ಕೇಂದ್ರ ಸರ್ಕಾರವು ಭರಿಸುವುದು.

**(3) ಕೋವಿಡ್-19 ರ ವಿಶೇಷ ಪ್ಯಾಕೇಜ್:**

(ಅ) ಕೋವಿಡ್-19 ರ ಮೊದಲನೆ ಅಲೆಯ ವಿಶೇಷ ಪ್ಯಾಕೇಜ್:

2020ನೇ ವರ್ಷದ ಕೋವಿಡ್-19ರ ಮೊದಲನೆ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ ಅಗಸ ಮತ್ತು ಕ್ಷೌರಿಕ ವೃತ್ತಿ ನಿರ್ವಹಿಸುತ್ತಿರುವ ಅಸಂಘಟಿತ ಕಾರ್ಮಿಕರಿಗೆ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದ ತಲಾ ರೂ.5,000/-ಗಳ ಒಂದು ಬಾರಿಯ ನೆರವಿನ ವಿಶೇಷ ಪ್ಯಾಕೇಜ್ ಅಡಿ ಈವರೆಗೆ 1,24,786 ಕಾರ್ಮಿಕರಿಗೆ ಒಟ್ಟು ರೂ.62.39 ಕೋಟಿಗಳ ನೆರವನ್ನು ವಿತರಿಸಲಾಗಿದೆ.

(ಆ) ಕೋವಿಡ್-19 ರ ಎರಡನೆ ಅಲೆಯ ವಿಶೇಷ ಪ್ಯಾಕೇಜ್:

2021ನೇ ವರ್ಷದ ಕೋವಿಡ್-19ರ ಎರಡನೇ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ 11 ವರ್ಗಗಳಾದ ಅಸಂಘಟಿತ

| | | |
|---|---|---|
| | | ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹಕಾರ್ಮಿಕರು, ಟೈಲರ್‌ಗಳು, ಮೆಕ್ಯಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿಕಾರ್ಮಿಕರಿಗೆ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದ ತಲಾ ರೂ. 2,000/-ಗಳ ಒಂದು ಬಾರಿಯ ನೆರವಿನ ವಿಶೇಷ ಪ್ಯಾಕೇಜ್ ಅಡಿ ಈವರೆಗೆ 12,05,159 ಅರ್ಹ ಅರ್ಜಿದಾರರಿಗೆ ರೂ. 241.03 ಕೋಟಿಗಳ ನೆರವನ್ನು ವಿತರಿಸಲಾಗಿದೆ. |
| ಇ) | ಸದರಿ ಸವಲತ್ತುಗಳನ್ನು ನೀಡುವಲ್ಲಿ ವಿಳಂಬ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಂಡಳಿಯಿಂದ ಫಲಾನುಭವಿಗಳಿಗೆ ನೀಡಲಾಗುವ ಎಲ್ಲಾ ಸೌಲಭ್ಯಗಳನ್ನು ಸೇವಾ ಸಿಂಧು ತಂತ್ರಾಂಶದ ಮೂಲಕ ಸಕಾಲ ಯೋಜನೆಯೊಂದಿಗೆ ಜೋಡಣೆ ಮಾಡಿ ನೀಡಲಾಗುತ್ತಿದೆ. ಈ ಯೋಜನೆಗಳಿಗೆ ಸಂಬಂಧಿಸಿದ ಅರ್ಜಿಗಳ ವಿಲೇವಾರಿಗಾಗಿ ಕಾಲಮಿತಿಯನ್ನು ನಿಗದಿಪಡಿಸಲಾಗಿದ್ದು, ಸದರಿ ಕಾಲಮಿತಿಯನ್ವಯ ಅರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ. ಆದರೆ ತಂತ್ರಾಂಶದ ದೋಷದಿಂದಾಗಿ ಕೆಲವು ಬಾರಿ ನಿಗದಿತ ಅವಧಿಯನ್ನು ಮೀರಿ ಸೌಲಭ್ಯಗಳನ್ನು ಮಂಜೂರು ಮಾಡಿ ಬ್ಯಾಂಕ್ ಖಾತೆಗಳಿಗೆ ಮೊತ್ತವನ್ನು ಜಮೆ ಮಾಡದಿರುವ ಪ್ರಕರಣಗಳು ಕಾರ್ಮಿಕರಿಂದ ವೈಯಕ್ತಿಕವಾಗಿ ಮತ್ತು ಸಂಘದ ಪದಾಧಿಕಾರಿಗಳಿಂದ ವರದಿಯಾಗಿರುತ್ತದೆ. ಆದರೆ, ಎಲ್ಲಾ ಅರ್ಹ ಫಲಾನುಭವಿಗಳಿಗೆ ಯೋಜನೆಗಳನ್ನು ತಲುಪಿಸಲು ಮಂಡಳಿಯು ಕ್ರಮ ಕೈಗೊಂಡಿರುತ್ತದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**<br><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ, ನೋಂದಣಿಯಾದ ಕೆಲವೊಂದು |

| | | |
|---|---|---|
| | | ಕಾರ್ಮಿಕರು ಗುರುತಿನ ಚೀಟಿ ದೊರೆತಿಲ್ಲವೆಂದು/ ದೊರೆಯಲು ವಿಳಂಬವಾಗುತ್ತಿರುವುದಾಗಿ ಕೆಲವು ದೂರುಗಳು ಬಂದಿರುತ್ತವೆ.<br>ಸದರಿ ಯೋಜನೆಯಡಿ ಕಾರ್ಮಿಕರನ್ನು ನೋಂದಾಯಿಸಿ ಗುರುತಿನ ಚೀಟಿ ನೀಡುವ ಪ್ರಕ್ರಿಯೆಯನ್ನು, ರಾಜ್ಯ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆ॥ ಕಿಯೋನಿಕ್ಸ್ ಸಂಸ್ಥೆಯ ಮೂಲಕ ನಡೆಸಲಾಗುತ್ತಿದೆ. ನೋಂದಾಯಿತ ಕಾರ್ಮಿಕರಿಗೆ ನಿಗದಿತ ಅವಧಿಯೊಳಗೆ ಗುರುತಿನ ಚೀಟಿ ನೀಡದ ಕುರಿತು ದೂರುಗಳು ಬಂದ ಹಿನ್ನೆಲೆಯಲ್ಲಿ ಸದರಿ ಸಂಸ್ಥೆಗೆ ಪತ್ರದ ಮೂಲಕ ಹಾಗೂ ಸಭೆ ನಡೆಸಿ ತಿಳುವಳಿಕೆ ನೀಡಲಾಗಿದ್ದು, ಎಲ್ಲಾ ನೋಂದಾಯಿತ ಕಾರ್ಮಿಕರಿಗೆ ತಕ್ಷಣವೇ ಗುರುತಿನ ಚೀಟಿ ನೀಡುವಂತೆ ತಿಳಿಸಲಾಗಿರುತ್ತದೆ.<br>ಗುರುತಿನ ಚೀಟಿ ಪಡೆಯಲು ವಿಳಂಬವಾಗುತ್ತಿರುವುದನ್ನು ಮನಗಂಡು, ಮಂಡಳಿಯು ತನ್ನ ವೆಬ್‌ಸೈಟ್ www:ksuwssb.karnataka.gov.in ನ ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು ಸಂಬಂಧಪಟ್ಟ ಕ್ಷೇತ್ರ ವ್ಯಾಪ್ತಿಯ ಕಾರ್ಮಿಕ ಅಧಿಕಾರಿಗಳು ಅನುಮೋದಿಸಿದ ನಂತರ ಸ್ಥಳದಲ್ಲೇ ಗುರುತಿನ ಚೀಟಿಯನ್ನು ಪಡೆಯಲು ಅವಕಾಶ ಮಾಡಿಕೊಡಲಾಗಿದೆ.<br>ಉಳಿದಂತೆ, ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳ ಕುರಿತು ಯಾವುದೇ ದೂರುಗಳು ಸ್ವೀಕೃತವಾಗಿರುವುದಿಲ್ಲ. |
| ಈ) | ಕಾರ್ಮಿಕರ ಮಕ್ಕಳಿಗೆ ಯಾವ ಯಾವ ತರಗತಿಯವರೆಗೆ, ಯಾವ ಮಾದರಿಯ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ; (ವಿವರ ನೀಡುವುದು) | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br>ಮಂಡಳಿಯು ನೋಂದಾಯಿತ ಫಲಾನುಭವಿಗಳ ಇಬ್ಬರು ಮಕ್ಕಳ ವಿವಿಧ ಹಂತದ ವಿದ್ಯಾಭ್ಯಾಸಕ್ಕಾಗಿ ಮಂಡಳಿಯ ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಯೋಜನೆಯಡಿ ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ: |

| ತರಗತಿ (ಉತ್ತೀರ್ಣಕ್ಕೆ) | |
|---|---|
| ಕಜಿ/ ಪೂರ್ವ ಶಾಲೆ /ನರ್ಸರಿ(ವ ರಿಂದ 5) | 5,000 |
| 1 ರಿಂದ 4ನೇ ತರಗತಿ | 5,000 |
| 5 ರಿಂದ 8ನೇ ತರಗತಿ | 8,000 |
| 9 ಹಾಗೂ 10ನೇ ತರಗತಿ | 12,000 |
| ಪದವಿ ಪೂರ್ವ | |
| ಪ್ರಥಮ ಪಿಯುಸಿ ಮತ್ತು ಪಿ.ಯು.ಸಿ | 15,000 |
| ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| ಜಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| ಡಿ.ಎಡ್ | 25,000 |
| ಬಿ.ಎಡ್ | 35,000 |
| ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ 2 ವರ್ಷಅವಧಿಗೆ ಒಳಪಟ್ಟು |
| ತಾಂತ್ರೀಕ/ ವೈದ್ಯಕೀಯ ಎನ್ ಇ ಇ ಟಿ ಅಥವಾ ಕೆ ಸಿ ಇ ಟಿ | |
| ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂ.ಜಿ. ಸಿ ಕೋರ್ಸ್ | ಸದರಿ ಕೋರ್ಸ್‌ಗಳಿಗೆ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000 |
| ಎಮ್.ಟೆಕ್/ಎಮ್‌ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೊತ್ತರ ಕೋರ್ಸ್) | ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕರೂ. 60,000 |
| ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ | ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ) |

| | | | | |
|---|---|---|---|---|
| | | | ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | |
| | | | ಎಮ್‌ಡಿ | ರೂ. 75,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು) |
| | | | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಕೇಂದ್ರ ಮತ್ತು ರಾಜ್ಯ /ಕೇಂದ್ರ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| | | | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋಧನಾ ಶುಲ್ಕ |

| | | |
|---|---|---|
| | | **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**<br>ಈ ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ, 1ನೇ ತರಗತಿಯಿಂದ ಪದವಿ ಪೂರ್ವ / 12ನೇ ತರಗತಿಯ ವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಧನ ಸಹಾಯ ನೀಡಲಾಗುತ್ತಿದೆ. |
| ಉ) | ವಿದ್ಯಾರ್ಥಿ ವೇತನ ಸಕಾಲದಲ್ಲಿ ವಿತರಿಸಲಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**<br>ಈ ಮಂಡಳಿಯ ಮೂಲಕ ವಿದ್ಯಾರ್ಥಿ ವೇತನ ಸಕಾಲದಲ್ಲಿ ವಿತರಿಸಲಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**<br>ಈ ಮಂಡಳಿಯ ಮೂಲಕ ಶೈಕ್ಷಣಿಕ ಧನ ಸಹಾಯ ವಿತರಿಸುವಲ್ಲಿ ಯಾವುದೇ ರೀತಿಯ ವಿಳಂಬವಾಗಿರುವುದಿಲ್ಲ. |
| ಊ) | ವಿದ್ಯಾರ್ಥಿ ವೇತನ ಸಕಾಲದಲ್ಲಿ ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ</u>**<br>ಮಂಡಳಿಯು ನೀಡುತ್ತಿರುವ ಶೈಕ್ಷಣಿಕ ಸಹಾಯ ಧನವನ್ನು ಶೀಘ್ರವಾಗಿ ವಿಲೇವಾರಿ ಮಾಡುವ ನಿಟ್ಟಿನಲ್ಲಿ State Scholarship Portal (SSP) ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. 31-03-2022 ರವರೆಗೆ ಈ ಸೌಲಭ್ಯದಡಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. SSP Portal ನಲ್ಲಿ ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು ಅರ್ಹತೆಗೆ ಅನುಗುಣವಾಗಿ ವಿಲೇವಾರಿ ಮಾಡಲಾಗುತ್ತಿದೆ. |

| | | |
|---|---|---|
| | | **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ, ಶೈಕ್ಷಣಿಕ ಧನ ಸಹಾಯ ವಿತರಿಸಲು ಈ ಕೆಳಕಂಡ ಕ್ರಮಗಳನ್ನು ಅನುಸರಿಸಲಾಗುತ್ತಿದೆ.<br><br>• ಶೈಕ್ಷಣಿಕ ಧನ ಸಹಾಯದ ಅರ್ಜಿಗಳನ್ನು ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮುಖಾಂತರ ಅಥವಾ ನೇರವಾಗಿ ಮಂಡಳಿಗೆ ಸಲ್ಲಿಸಬಹುದು<br>• ಸದರಿ ಅರ್ಜಿಗಳನ್ನು ಹಾಗೂ ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ ಧನ ಸಹಾಯದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ. |

ಕಾಇ 208 ಎಲ್ಇಟಿ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

<u>ಅನುಬಂಧ</u>

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ಇವರ

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2573**

**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯವತಿಯಿಂದ ಮಂಡಳಿಯ ವತಿಯಿಂದ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳು</u>**

**ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಬಿತರಿಗೆ ಸಹಾಯ ಧನ ನೀಡಲು ಈ ಕೆಳಕಂಡ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:**

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್ ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಬಿತರಿಗೆ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.**2,00,000/-** ದವರೆಗೆ ಮುಂಗಡ ಸೌಲಭ್ಯ
8. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. **30,000/-** ಮತ್ತು ಗಂಡು ಮಗುವಿನ ಜನನಕ್ಕೆ ರೂ.**20,000/-**
9. ಶಿಶು ಪಾಲನಾ ಸೌಲಭ್ಯ:
10. ಅಂತ್ಯಕ್ರಿಯೆ ವೆಚ್ಚ : ರೂ.**4,000/-** ಹಾಗೂ ಅನುಗ್ರಹ ರಾಶಿ ರೂ.**50,000/-**ಸಹಾಯಧನ
11. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ(ವರ್ಷ 3 ರಿಂದ 5) | **5,000** |
| 2 | 1 ರಿಂದ 4ನೇ ತರಗತಿ | **5,000** |
| 3 | 5 ರಿಂದ 8ನೇ ತರಗತಿ | **8,000** |
| 4 | 9 ಹಾಗೂ 10ನೇ ತರಗತಿ | **12,000** |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | **15,000** |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | **20,000** |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | **40,000** |

| | | |
|---|---|---|
| 8 | ಡಿ.ಎಡ್ | **25,000** |
| | ಬಿ.ಎಡ್ | **35,000** |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | **25,000** |
| 10 | ಎಲ್ಎಲ್‌ಬಿ / ಎಲ್ಎಲ್ಎಮ್ | **30,000** |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | **35,000 ಗರಿಷ್ಠ 2 ವರ್ಷಅವಧಿಗೆ ಒಳಪಟ್ಟು** |
| | **ತಾಂತ್ರೀಕ/ ವೈದ್ಯಕೀಯ ಎನ್ ಇ ಇ ಟಿ ಅಥವಾ ಕೆ ಸಿ ಇ ಟಿ** | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂ.ಜಿ. ಸಿ ಕೋರ್ಸ್ | **ಸದರಿ ಕೋರ್ಸ್‌ಗಳಿಗೆ ಗರಿಷ್ಠ 2 ವರ್ಷ ಅವಧಿಗೆ ಒಳಪಟ್ಟು ವಾರ್ಷಿಕ ರೂ.50,000** |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್) | **ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು ವಾರ್ಷಿಕರೂ. 60,000** |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ಎಸ್ / ಬಿಡಿಎಸ್ /ಬಿಹೆಚ್ಎಮ್ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರ ಕೋರ್ಸ್ | **ರೂ.60,000 (ಸದರಿ ಕೋರ್ಸ್‌ನ ಗರಿಷ್ಠ ಅವಧಿಗೆ ಒಳಪಟ್ಟು )** |
| | ಎಮ್‌ಡಿ | **ರೂ. 75,000 (ಸದರಿ ಕೋರ್ಸ್‌ನಗರಿಷ್ಠ ಅವಧಿಗೆ ಒಳಪಟ್ಟು)** |
| 15 | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ ಮೂರು ವರ್ಷಗಳಿಗೆ ಹಾಗೂ ಎಮ್‌ಫಿಲ್‌ಗೆ 1 ವರ್ಷಕ್ಕೆ ಪ್ರತಿ ವರ್ಷ ರೂ. 25,000 (ಯೂಜಿಸಿಯ ಜೂನಿಯರ್ ರಿಸರ್ಚ್ ಫೆಲೋಶಿಫ್‌ಗೆ ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ ಕೇಂದ್ರ ವ ರಾಜ್ಯ /ಕೇಂದ್ರ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ ಯೂಜಿಸಿ ನಿಯಮಗಳನ್ವಯ ವೇತನ ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ ಅನುದಾನಿತ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಆಭ್ಯರ್ಥಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್ಇಆರ್/ ಎಐಐಎಮ್ಎಸ್ /ಎನ್ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/-** ರಿಂದ **ರೂ.10,000/-ವರೆಗೆ**
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-,** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. ಮಂಡಳಿಯ ಫಲಾನುಭವಿಗಳ ಮಕ್ಕಳು ಐಎಎಸ್/ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ತರಬೇತಿ.
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯ ಧನ.